<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಆನ್ ಲೈನ್ ಶಿಕ್ಷಣ ವಿಷಯವಾಗಿ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯದ ಮಾರ್ಗದರ್ಶಿ "ಪ್ರಗ್ಯಾತಾ" ಅನ್ನು ಅನುಸರಿಸುವ ಕುರಿತು – ಮುಂದುವರೆದ ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಇಪಿ 139 ಪಿಜಿಸಿ 2020, ದಿನಾಂಕ 15-06-2020 ಮತ್ತು ತಿದ್ದುಪಡಿ / ಸೇರ್ಪಡೆ ಆದೇಶ ದಿನಾಂಕ: 27.06.2020.
2. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ದೈನಂದಿನ ಆದೇಶ ಸಂಖ್ಯೆ: I.A.No.3/2020 in W.P.No. 8168/2020, ದಿನಾಂಕ 26-06-2020.
3. ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಭಾರತ ಸರ್ಕಾರ ಇವರ ಪ್ರಗ್ಯಾತಾ-ಡಿಜಿಟಲೀಕರಣ ಕುರಿತಾದ ಮಾರ್ಗದರ್ಶಿ.

*****

**ಪ್ರಸ್ತಾವನೆ:**

ಆನ್ ಲೈನ್ ಶಿಕ್ಷಣದ ಹೆಸರಿನಲ್ಲಿ ರಾಜ್ಯದ ಸುಮಾರು ಶಾಲೆಗಳು ಅವೈಜ್ಞಾನಿಕವಾಗಿ ಭೋಧನೆಯನ್ನು ನಡೆಸುತ್ತಿರುವ ಕುರಿತು ಸಾಕಷ್ಟು ದೂರುಗಳು ಬಂದಿರುತ್ತವೆ. ಈ ಹಿನ್ನೆಲೆಯಲ್ಲಿ ಮೇಲೆ ಓದಲಾದ (1)ರ ಆದೇಶದ ಪ್ರಕಾರ ಸರ್ಕಾರವು ಎಲ್.ಕೆ.ಜಿ.ಯಿಂದ 5ನೇ ತರಗತಿಯವರೆಗೆ ಆನ್ ಲೈನ್/ ಆಫ್ ಲೈನ್ ಬೋಧನೆಯನ್ನು ಸರ್ಕಾರದ ಮಾರ್ಗಸೂಚಿಗಳು ಬರುವವರಗೂ ಮಾಡತಕ್ಕದ್ದಲ್ಲ ಎಂದು ಆದೇಶಿಸಿದೆ. ಮುಂದುವರೆದು, ಎಲ್.ಕೆ.ಜಿ.ಯಿಂದ 5ನೇ ತರಗತಿಯವರೆಗೆ ಮತ್ತು 6 ರಿಂದ 10ನೇ ತರಗತಿಯವರೆಗೆ ಆನ್ ಲೈನ್ ಶಿಕ್ಷಣವನ್ನು ವಯೋಮಾನಕ್ಕೆ ಅನುಗುಣವಾಗಿ, ವೈಜ್ಞಾನಿಕವಾಗಿ ಅಳವಡಿಸಲು ಮಾರ್ಗಸೂಚಿಗಳನ್ನು ಸಿದ್ಧಪಡಿಸಲು ತಜ್ಞರ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯು ಪ್ರಸ್ತುತ ಕಾರ್ಯನಿರ್ವಹಿಸುತ್ತಿದ್ದು, ಎರಡು ಸಭೆಗಳನ್ನು ನಡೆಸಿದೆ.

ಮೇಲೆ ಓದಲಾದ (2)ರಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಲಯವು ಈ ಸಮಿತಿಯು ವರದಿಯನ್ನು ನೀಡುವವರೆಗೆ, ಸೀಮಿತ ಅವಧಿಯ ಆನ್ ಲೈನ್ ಶಿಕ್ಷಣ ಒದಗಿಸುವ ಬಗ್ಗೆ ಸರ್ಕಾರ ಪರಿಗಣಿಸಬೇಕೆಂಬ ಇಂಗಿತ ವ್ಯಕ್ತಪಡಿಸಿದೆ. ಮುಂದುವರೆದು, ಮೇಲೆ ಓದಲಾದ (3)ರಂತೆ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಭಾರತ

ಸರ್ಕಾರ, ಇವರು ರಾಜ್ಯಗಳ ವಿವೇಚನೆಗೆ ಒಳಪಟ್ಟು ಪರಿಸ್ಥಿತಿಗೆ ಅನುಗುಣವಾಗಿ ಅಳವಡಿಸಬಹುದಾದ ಆನ್ ಲೈನ್ ಶಿಕ್ಷಣದ ಕುರಿತಾದ ಮಾರ್ಗಸೂಚಿಗಳನ್ನು ಹೊರಡಿಸಿರುತ್ತಾರೆ. ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಪರಿಶೀಲಿಸಿ, ಅದರಂತೆ ಈ ಕೆಳಕಂಡ ಮುಂದುವರೆದ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 139 ಪಿಜಿಸಿ 2020,**
**ಬೆಂಗಳೂರು, ದಿನಾಂಕ: 27.06.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಭಾರತ ಸರ್ಕಾರ, ಇವರ ಡಿಜಿಟಲೀಕರಣ ಕುರಿತಾದ ಮಾರ್ಗದರ್ಶಿ ಸೂತ್ರಗಳ ಪ್ರಕಾರ ರಾಜ್ಯದಲ್ಲಿನ ರಾಜ್ಯ ಪಠ್ಯಕ್ರಮ ಹಾಗೂ ಇನ್ನಿತರ ಪಠ್ಯಕ್ರಮಗಳಾದ ICSE/CBSE/ ಅಂತರರಾಷ್ಟ್ರೀಯ ಪಠ್ಯಕ್ರಮ ಸೇರಿದಂತೆ ಎಲ್ಲಾ ಶಾಲೆಗಳು ಎಲ್.ಕೆ.ಜಿಯಿಂದ 10ನೇ ತರಗತಿಯವರೆಗೆ ಆನ್ ಲೈನ್ ಶಿಕ್ಷಣ ನೀಡುವ ಸಂಬಂಧ ಈ ಕೆಳಕಂಡಂತೆ ವಿಧಾನಗಳನ್ನು ಅನುಸರಿಸಲು ಆದೇಶಿಸಿದೆ.

| | |
|---|---|
| ಪೂರ್ವ ಪ್ರಾಥಮಿಕ | 30 ನಿಮಿಷಗಳಿಗೆ ಮೀರದಂತೆ ಪಾಲಕರೊಂದಿಗೆ ಮಾತ್ರ ವಾರಕ್ಕೆ ಒಂದು ದಿನ ಆನ್ ಲೈನ್ ಸಂವಹನ ಮತ್ತು ಮಾರ್ಗದರ್ಶನ ನೀಡಬಹುದು. |
| 1 ರಿಂದ 5 | 30-45 ನಿಮಿಷಗಳ 2 ಅವಧಿಗಳಿಗೆ ಮೀರದಂತೆ ದಿನ ಬಿಟ್ಟು ದಿನ (ವಾರದಲ್ಲಿಗರಿಷ್ಠ 3 ದಿನ) synchronous ವಿಧಾನದಲ್ಲಿ ಆನ್ ಲೈನ್ ಶಿಕ್ಷಣ ನೀಡಬಹುದು. |
| 6 ರಿಂದ 8 | 30-45 ನಿಮಿಷಗಳ 2 ಅವಧಿಗಳಿಗೆ ಮೀರದಂತೆ ವಾರದಲ್ಲಿ 5 ದಿನ synchronous ವಿಧಾನದಲ್ಲಿ ಆನ್ ಲೈನ್ ಶಿಕ್ಷಣ ನೀಡಬಹುದು |
| 9 ರಿಂದ 10 | 30-45 ನಿಮಿಷಗಳ 4 ಅವಧಿಗಳಿಗೆ ಮೀರದಂತೆ ವಾರದಲ್ಲಿ 5 ದಿನ synchronous ವಿಧಾನದಲ್ಲಿ ಆನ್ ಲೈನ್ ಶಿಕ್ಷಣ ನೀಡಬಹುದು |

ಸದರಿ ವ್ಯವಸ್ಥೆಯು ಆನ್ ಲೈನ್ ಶಿಕ್ಷಣದ ಮಾದರಿ ಸಿದ್ಧಪಡಿಸಲು ಸರ್ಕಾರ ನೇಮಿಸಿರುವ ತಜ್ಞರ ಸಮಿತಿ ನೀಡುವ ವರದಿಯನ್ನು ಆಧರಿಸಿ ರಾಜ್ಯ ಸರ್ಕಾರ ಹೊರತರಲಾಗುವ ಅಂತಿಮ ಮಾರ್ಗಸೂಚಿಗಳು ಬರುವವರೆಗೆ ಮಾತ್ರ ಜಾರಿಯಲ್ಲಿ ಇರುತ್ತದೆ. ಆನ್ ಲೈನ್ ಶಿಕ್ಷಣದ ಕುರಿತಂತೆ ಪ್ರಜ್ಞಾತಾ-ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಭಾರತ ಸರ್ಕಾರ ಇವರ ಡಿಜಿಟಲೀಕರಣ ಕುರಿತಾದ ಮಾರ್ಗದರ್ಶಿಯಲ್ಲಿನ ಸೂಚನೆಗಳನ್ನು ಅನುಸರಿಸುವುದು. ಕೋವಿಡ್-19 ಸಾಂಕ್ರಾಮಿಕ ರೋಗದ ಪರಿಸ್ಥಿತಿಯ

ಹಿನ್ನೆಲೆಯಲ್ಲಿ ನಿಯಮಿತ ಶಿಕ್ಷಣಕ್ಕೆ ಪೂರಕವಾಗಿ ಆನ್ ಲೈನ್ ಶಿಕ್ಷಣ ಒದಗಿಸಬೇಕಾಗಿ ಬಂದಿರುವುದರಿಂದ, ಆನ್ ಲೈನ್ ಶಿಕ್ಷಣಕ್ಕಾಗಿ ಯಾವುದೇ ಹೆಚ್ಚುವರಿ ಶುಲ್ಕ ವಿಧಿಸಬಾರದಾಗಿ ತಿಳಿಸಿದೆ. ಇದಕ್ಕಾಗಿ ತಗಲುವ ವೆಚ್ಚವನ್ನು ನಿಯಮಿತ ವಾರ್ಷಿಕ ಬೋಧನಾ ಶುಲ್ಕದಿಂದಲೇ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಶೇಖರ್
**(ಶೇಖರ್)** ೨೭/೦೬/೨೦೨೦
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
ಶಿಕ್ಷಣ ಇಲ್ಲಾಖೆ (ಪ್ರಾಥಮಿಕ)

**ಇವರಿಗೆ:**

1) ಮಹಾಲೇಖಪಾಲಕರು ಎ & ಇ ಬೆಂಗಳೂರು.
2) ಅಡ್ವೊಕೇಟ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಅಡ್ವೊಕೇಟ್ ಜನರಲ್ ರವರ ಕಛೇರಿ, ಬೆಂಗಳೂರು.
3) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು - ಸಮಿತಿಗೆ ಸಂಬಂಧ ಪಟ್ಟ ಪ್ರಾಧಿಕಾರ/ಮಂಡಳಿಗಳಿಂದ ಮಾಹಿತಿ ಅಗತ್ಯವೆನಿಸಿದಲ್ಲಿ ನೇರವಾಗಿ ಸಮಿತಿಗೆ ಮಾಹಿತಿ ಒದಗಿಸುವಂತೆ ಕೋರಿದೆ.
4) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
5) ಅಪರ ಆಯುಕ್ತರು, ಕಲಬುರಗಿ/ಧಾರವಾಡ.
6) ನಿರ್ದೇಶಕರು (ಪ್ರಾಥಮಿಕ/ಪ್ರೌಢ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7) ನಿರ್ದೇಶಕರು (ಗುಣಮಟ್ಟ), ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು.
8) ಸಮಿತಿ ಸದಸ್ಯರಿಗೆ-ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಖಾಂತರ.
9) ಖಾಸಗಿ ಅನುದಾನಿತ/ಅನುದಾನರಹಿತ ಶಾಲಾ ಆಡಳಿತ ಮಂಡಳಿಗಳು/ಸಂಘ ಸಂಸ್ಥೆಗಳು- ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಖಾಂತರ.
10) ಶಾಖಾ ರಕ್ಷಾಕಡತ.

**ಪ್ರತಿ:**

1) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಶಿಕ್ಷಣ ಇಲಾಖೆ.
3) ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು), ಶಿಕ್ಷಣ ಇಲಾಖೆ, ಇವರ ಆಪ್ತ ಸಹಾಯಕರು.